# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 229
ಸದಸ್ಯರ ಹೆಸರು : ಶ್ರೀ. ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 10/12/2024
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳನ್ನು ಜಿಲ್ಲಾಡಳಿತ ಸರ್ಕಾರಕ್ಕೆ ಸಲ್ಲಿಸಿದೆಯೇ; | <u>ಕಲಬುರಗಿ ಜಿಲ್ಲೆ:</u><br>ಕಲಬುರಗಿ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಜಿಲ್ಲಾಧಿಕಾರಿ, ಕಲಬುರಗಿ ಜಿಲ್ಲೆ ರವರಿಂದ ಪ್ರಸ್ತುತ ಯಾವುದೇ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |
| ಆ | ಸಲ್ಲಿಸಿದ್ದಲ್ಲಿ, ಸದರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ನಿರ್ಧರಿಸಿದೆ; (ಗ್ರಾಮ ಪಂಚಾಯಿತಿವಾರು ವಿವರ ನಿಡುವುದು) | <u>ಯಾದಗಿರಿ ಜಿಲ್ಲೆ:</u><br><u>ದೋರನಹಳ್ಳಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ:</u> 2011 ರ ಜನಗಣತಿಯನ್ವಯ ಈ ಪ್ರಸ್ತಾವನೆಯು ಜನಸಂಖ್ಯೆಯ ಮಾನದಂಡವನ್ನು ಪೂರೈಸದೇ ಇರುವ ಕಾರಣ ಪ್ರಸ್ತಾವನೆಯನ್ನು ಪರಿಶೀಲನೆಯಿಂದ ಕೈಬಿಟ್ಟು ಮುಕ್ತಾಯಗೊಳಿಸಲಾಗಿರುತ್ತದೆ.<br><br><u>ಸಗರ(ಬಿ) ಗ್ರಾಮ ಪಂಚಾಯಿತಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ:</u> ಶಹಾಪುರ ತಾಲೂಕಿನ ಸಗರ (ಬಿ) ಗ್ರಾಮ ಪಂಚಾಯಿತಿಯು ಜನಸಾಂದ್ರತೆಯ ಮಾನದಂಡವನ್ನು ಪೂರೈಸದ ಕಾರಣ ಪ್ರಸ್ತಾವನೆಯನ್ನು ಪರಿಶೀಲನೆಯಿಂದ ಕೈಬಿಟ್ಟು ಮುಕ್ತಾಯಗೊಳಿಸಲಾಗಿರುತ್ತದೆ.<br><br><u>ವಡಗೇರಾ ಗ್ರಾಮ ಪಂಚಾಯಿತಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ:</u><br>ವಡಗೇರಾ ಗ್ರಾಮ ಪಂಚಾಯಿತಿಯ ಪ್ರಸ್ತಾವನೆಯನ್ನು ಈ ಹಿಂದೆ ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿ ಸಹಮತಿ ನೀಡದೇ ಇದ್ದುದರಿಂದ ಹಾಗೂ ಆ ಸಮಯದಲ್ಲಿ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸುವ ಕಾಲಾವಕಾಶವು ದಿನಾಂಕ:30/06/2024 ಕ್ಕೆ ಮುಕ್ತಾಯಗೊಂಡಿದ್ದರಿಂದ, ಪ್ರಸ್ತಾವನೆಯನ್ನು ಪರಿಶೀಲನೆಯಿಂದ ಕೈಬಿಟ್ಟು ಮುಕ್ತಾಯಗೊಳಿಸಲಾಗಿರುತ್ತದೆ. |

| | | |
|---|---|---|
| ಇ | ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಅನುಸರಿಸುವ ಮಾನದಂಡಗಳೇನು? (ಇದಕ್ಕೆ ಸಂಬಂಧಿಸಿದ ಆದೇಶ ಪ್ರತಿಯನ್ನು ಒದಗಿಸುವುದು) | ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ-349 ರ ಮಾನದಂಡಗಳನ್ನು ಅನುಸರಿಸಲಾಗುತ್ತದೆ:<br>1. ಅಂಥ ಪ್ರದೇಶದ ಜನಸಂಖ್ಯೆ ಹತ್ತು ಸಾವಿರಕ್ಕಿಂತ ಕಡಿಮೆಯಿಲ್ಲದ ಮತ್ತು ಇಪ್ಪತ್ತು ಸಾವಿರಕ್ಕಿಂತ ಹೆಚ್ಚಿಲ್ಲದ ಹೊರತು;<br>2. ಅಂಥ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋಮೀಟರ್ ಪ್ರದೇಶಕ್ಕೆ ನಾಲ್ಕುನೂರು ನಿವಾಸಿಗಳಿಗಿಂತ ಕಡಿಮೆಯಿಲ್ಲದ ಹೊರತು;<br>3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗದ ಶೇಕಡಾವಾರು ಒಟ್ಟು ಉದ್ಯೋಗದ ಶೇಕಡ ಐವತ್ತಕ್ಕಿಂತ ಕಡಿಮೆಯಿಲ್ಲದ ಹೊರತು;<br>• ದಿನಾಂಕ:19/03/2015 ರ ಸಚಿವ ಸಂಪುಟ ನಿರ್ಣಯದಂತೆ 15,000 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುತ್ತದೆ.<br>• ಮೇಲ್ದರ್ಜೆಗೇರಿಸಲಾಗುವ ಪ್ರದೇಶವು ತಾಲೂಕು ಕೇಂದ್ರವಾಗಿದ್ದಲ್ಲಿ ಅಲ್ಲಿನ ಜನಸಂಖ್ಯೆ 10,000 ಕ್ಕಿಂತ ಕಡಿಮೆ ಇದ್ದರೂ ಸಹ ಪರಿಗಣಿಸಬಹುದಾಗಿದೆ. |

ಸಂಖ್ಯೆ:ನಅಇ 65 ಎಲ್‌ಸಿಕ್ಯೂ 2024.

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು